ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ತುಮಕೂರು ವಿಶ್ವವಿದ್ಯಾನಿಲಯವನ್ನು ಬೇರೆ ಕಡೆಗೆ ಸ್ಥಳಾಂತರಿಸುವ ಬಗ್ಗೆ

ಶ್ರೀ ಕಾಂತ್‌ರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

29 (60) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ವಿಶ್ವವಿದ್ಯಾನಿಲಯವನ್ನು ಬೇರೆಡೆಗೆ ಸ್ಥಳಾಂತರಿಸಲು ಸರ್ಕಾರ ಇಲ್ಲಿಯ ತನಕ ಕೈಗೊಂಡಿರುವ ಕಾರ್ಯಕ್ರಮಗಳೇನು; (ವಿವರ ನೀಡುವುದು)

(ಆ) ವಿಶ್ವವಿದ್ಯಾನಿಲಯಕ್ಕೆ ಕ್ಯಾಂಪಸ್ ನಿರ್ಮಾಣ ಮಾಡಲು ಎಲ್ಲಿ ಎಷ್ಟು ಸ್ಥಳವನ್ನು ಗುರುತಿಸಲಾಗಿದೆ; (ವಿವರ ನೀಡುವುದು)

(ಇ) ರಾಜ್ಯ ಸರ್ಕಾರ ತಾಂತ್ರಿಕ ಶಿಕ್ಷಣ ಸೇರಿದಂತೆ ನವೀನ ರೀತಿಯ ಎನ್ನೋವೇಟಿವ್ ವಿಶ್ವವಿದ್ಯನಿಲಯವನ್ನು ಸ್ಥಾಪಿಸಲು ಯು.ಜಿ.ಸಿ. ಯಿಂದ ಅನುದಾನವನ್ನು ಪಡೆಯಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆಯೇ; ಸಲ್ಲಿಸಿದ್ದಲ್ಲಿ ಯಾವಾಗ ಸಲ್ಲಿಸಲಾಗಿದೆ; ಎಷ್ಟು ಅನುದಾನವನ್ನು ಕೋರಲಾಗಿದೆ; (ವಿವರ ನೀಡುವುದು)

(ಈ) ತುಮಕೂರು ನಗರ ಸ್ಮಾರ್ಟ್ ಸಿಟಿ ಅನುದಾನವನ್ನು ಬಳಸಿಕೊಂಡಂತೆ ಸರ್ಕಾರದ ಮತ್ತು ಯು.ಜಿ.ಸಿ. ಅನುದಾನವನ್ನು ಬಳಸಿಕೊಂಡು ಹೈಟೆಕ್ ವಿಶ್ವವಿದ್ಯಾನಿಲಯ ನಿರ್ಮಾಣ ಮಾಡಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ?